# ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಖ್ಯೆ :ಇಡಿ/ಕೆಇಎ/ಪರೀಕ್ಷೆ/ಸಿಆರ್–190/2025 ದಿನಾಂಕ: 05.05.2025

**ಅಧಿಸೂಚನೆ**

**ವಿಷಯ: 2025–26ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮೂಲಕ ಕಲ್ಯಾಣ ಕರ್ನಾಟಕ ಭಾಗದಲ್ಲಿನ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ಮತ್ತು ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಐ.ಎ.ಎಸ್ ಹಾಗೂ ಕೆ.ಎ.ಎಸ್ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಆಯ್ಕೆ ಮಾಡುವ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಬಗ್ಗೆ.**

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2025ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮೂಲಕ ಕಲ್ಯಾಣ ಕರ್ನಾಟಕ ಭಾಗದಲ್ಲಿನ ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡಗಳ ಮತ್ತು ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಐ.ಎ.ಎಸ್ ಹಾಗೂ ಕೆ.ಎ.ಎಸ್ ಪರೀಕ್ಷೆಗಳ ಪೂರ್ವಭಾವಿ ತರಬೇತಿ ನೀಡಲು ಉದ್ದೇಶಿಸಿದೆ.

ಐ.ಎ.ಎಸ್ ಹಾಗೂ ಕೆ.ಎ.ಎಸ್ ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ಮತ್ತು ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳನ್ನು ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸಿ ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ನಿಗದಿತ ಸಂಖ್ಯೆಗೆ ಅನುಗುಣವಾಗಿ ಆಯ್ಕೆ ಮಾಡಲಾಗುತ್ತದೆ.

ಐ.ಎ.ಎಸ್ ಹಾಗೂ ಕೆ.ಎ.ಎಸ್ ಪರೀಕ್ಷೆಗಳ ಪೂರ್ವಭಾವಿ ತರಬೇತಿಯ ಅವಧಿ, ಶೈಕ್ಷಣಿಕ ವಿದ್ಯಾರ್ಹತೆ, ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ವಿವರಗಳು ಈ ಕೆಳಗಿನಂತಿದೆ.

| ಕ್ರ ಸಂ. | ವಿವರ | |
|---|---|---|
| 1 | ಯೋಜನೆ ಹೆಸರು ಮತ್ತು ಉದ್ದೇಶ | ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿನ ಅಭ್ಯರ್ಥಿಗಳಿಗೆ IAS & KAS ಪರೀಕ್ಷೆಗಳಿಗೆ ತರಬೇತಿ ನೀಡಿ ಈ ಭಾಗದ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಅರಿವು ಆಗಬೇಕು ಎಂಬ ಉದ್ದೇಶವಿದ್ದು ಸದರಿ ತರಬೇತಿಯು ಕೇವಲ ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿನ ಅಭ್ಯರ್ಥಿಗಳಿಗೆ ಅನ್ವಯವಾಗಿರುತ್ತದೆ. (ಜಿಲ್ಲೆಗಳ ಹೆಸರು: ಕಲಬುರಗಿ, ಕೊಪ್ಪಳ, ಬೀದರ್, ಯಾದಗಿರಿ, ಬಳ್ಳಾರಿ, ರಾಯಚೂರು, ವಿಜಯನಗರ,) |
| 2 | ಮೀಸಲಾತಿ ವಿವರ | |
| | **Category Name** | **Reservation Percentage** |
| | Scheduled Tribes (ST) | 3% |
| | Scheduled Castes (SC) | 15% |
| | Other Backward Classes (OBC) | 32% |

| ಕ್ರ ಸಂ. | ವಿವರ | |
|---|---|---|
| | Economically Weaker Sections (EWS) | 10% |
| | GM | 40% |
| | **Total** | **100%** |
| | **OBCs is divided among five groups as under** | |
| | 1) Category 1 | 4% |
| | 2) 2A Category | 15% |
| | 3) 2B Category | 4% |
| | 4) 3A Category | 4% |
| | 5) 3B Category | 5% |
| | **Grand TOTAL** | **32%** |
| 3 | ಅರ್ಜಿ ಶುಲ್ಕ | • ಆನ್‌ಲೈನ್ ಅರ್ಜಿ ಶುಲ್ಕ – ರೂ 750/- (ಸಾಮಾನ್ಯ, 2ಎ, 2ಬಿ, 3ಎ & 3ಬಿ ಅಭ್ಯರ್ಥಿಗಳಿಗೆ)<br>• ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಮತ್ತು ವಿಶೇಷ ಚೇತನ ಅಭ್ಯರ್ಥಿಗಳಿಗೆ ಪರೀಕ್ಷಾ ಶುಲ್ಕದಿಂದ ವಿನಾಯಿತಿ ನೀಡಲಾಗಿದೆ. |
| 4 | ತರಬೇತಿ ಅವಧಿ (10 ತಿಂಗಳು) | IAS/KAS-05 months for Prelims and 05 months for Mains and interview (Those who have qualified in Prelims examination are eligible for Mains coaching) |
| 5 | ವಯೋಮಿತಿ | 21 ರಿಂದ 37 ವರ್ಷ. |
| 6 | ಕೋರ್ಸಿನ ವಿವರ | ಕೇಂದ್ರ ಲೋಕಸೇವಾ ಆಯೋಗ ಮತ್ತು ಕರ್ನಾಟಕ ಲೋಕಸೇವಾ ಆಯೋಗ ಕ್ರಮವಾಗಿ ಪ್ರತಿ ವರ್ಷ ಐ.ಎ.ಎಸ್, ಐ.ಎಫ್.ಎಸ್. ಐ.ಪಿ.ಎಸ್, ಐ.ಆರ್.ಎಸ್. ಮೊದಲಾದ 23 ವಿವಿಧ ಸೇವೆಗಳ ಹುದ್ದೆಗಳು ಮತ್ತು ಕೆ.ಎ.ಎಸ್ ಹುದ್ದೆಗಳ ನೇಮಕಾತಿಗೆ ನಡೆಸುವ ಪರೀಕ್ಷೆಗಳ ಸಿದ್ದತೆಗೆ (ಗೆಜೆಟೆಡ್ ಪ್ರೋಬೆಷನರಿ ಆಫೀಸರ್ಸ್) ತರಬೇತಿ ನೀಡಬೇಕಾಗಿರುತ್ತದೆ.<br>ಸದರಿ ತರಬೇತಿಗೆ ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಮತ್ತು ಪದವಿ ಅಂತಿಮ ಸೆಮಿಸ್ಟರ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳು ಸಹ ಅರ್ಜಿ ಸಲ್ಲಿಸಲು ಅರ್ಹರಿದ್ದು, ಆಯ್ಕೆ ಪ್ರಕ್ರಿಯೆಯ ಹಂತದಲ್ಲಿ ಪದವಿ ವ್ಯಾಸಂಗ ಮುಕ್ತಾಯಗೊಳಿಸಿರುವ ಬಗ್ಗೆ ಅಧಿಕೃತ ದಾಖಲೆಗಳನ್ನು ಹೊಂದಿರಬೇಕು ಮತ್ತು ಸಲ್ಲಿಸಬೇಕು. |
| 7 | ಅಭ್ಯರ್ಥಿಯ ಸಾಮಾನ್ಯ ಅರ್ಹತೆ | 1. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.<br>2. ಕಡ್ಡಾಯವಾಗಿ ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿ ಆಗಿರಬೇಕು.<br>3. 371(ಜೆ) ಪ್ರಮಾಣ ಪತ್ರವನ್ನು ಹೊಂದಿರಬೇಕು.<br>4. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿಗದಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಪಡೆದಿರಬೇಕು.<br>5. ವಿಶೇಷ ಚೇತನ ಮೀಸಲಾತಿಯ ಅಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳ ನಿಗದಿತ ಪ್ರಾಧಿಕಾರದಿಂದ ನಿಗದಿಪಡಿಸಲಾದ ಕೊನೆಯ ದಿನಾಂಕದೊಳಗೆ ವಿಶೇಷ ಚೇತನ ಪ್ರಮಾಣ ಪತ್ರ ಪಡೆದಿರಬೇಕು. |

| ಕ್ರ ಸಂ. | ವಿವರ | |
|---|---|---|
| | | 6. ವಿದ್ಯಾರ್ಥಿ ನಿಲಯ/ ಕ್ರೈಸ್ ವಿದ್ಯಾರ್ಥಿ ನಿಲಯ/ಸಫಾಯಿ ಕರ್ಮಚಾರಿ ಮೀಸಲಾತಿ ಅಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರ ಪಡೆದಿರಬೇಕು. |
| 8 | ವಾರ್ಷಿಕ ಆದಾಯ | ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ ರೂ.5.00 ಲಕ್ಷ ಮೀರಬಾರದು. |
| 9 | ಆಯ್ಕೆ ವಿಧಾನ | 1. ಅಭ್ಯರ್ಥಿಗಳನ್ನು ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ.<br>2. ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ಮೂಲಕ ಅಭ್ಯರ್ಥಿಗಳನ್ನು ತರಬೇತಿ ಸಂಸ್ಥೆಗೆ ನಿಯೋಜಿಸಲಾಗುತ್ತದೆ.<br>3. ಪ್ರವೇಶ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸಲಾಗುತ್ತದೆ. |
| 10 | ಶಿಷ್ಯ ವೇತನ | ಬಯೋಮೆಟ್ರಿಕ್ ಶಿಷ್ಯವೇತನವನ್ನು ಪ್ರತಿ ಮಾಹೆ ತರಬೇತಿ ಕೇಂದ್ರ ಸಂಸ್ಥೆಯವರು ಸಲ್ಲಿಸುವ ಹಾಜರಾತಿಯ ಅನ್ವಯ ಪಾವತಿಸಲಾಗುವುದು. ಆದರೆ ತರಬೇತಿ ಅವಧಿಯಲ್ಲಿ ಯಾವುದೇ ವಸತಿ ಸೌಲಭ್ಯವನ್ನು ನೀಡಲಾಗುವುದಿಲ್ಲ. |
| 11 | ತರಬೇತಿ ಪ್ರವೇಶ ಪರೀಕ್ಷೆಗೆ ಅಭ್ಯರ್ಥಿಗಳ ಆಯ್ಕೆ ಸಂಖ್ಯೆ | IAS: 100<br>KAS: 400 |

**ಸ್ಥಾನ ಹಂಚಿಕೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಒಳ ಮೀಸಲಾತಿ/ವಿಶೇಷ ಮೀಸಲಾತಿ ವಿವರಗಳು:**

| ಕ್ರ.ಸಂ | ಮೀಸಲಾತಿ | ಶೇಕಡ ವಾರು | ಅರ್ಹರು | ಷರಾ |
|---|---|---|---|---|
| 1 | ವಿಶೇಷ ಚೇತನ | 4% | Right of person with disabilities act 2016 ರಂತೆ ಸಕ್ಷಮ ಪ್ರಾಧಿಕಾರದಿಂದ ವಿಶೇಷ ಚೇತನ ಪ್ರಮಾಣ ಪತ್ರ ಹೊಂದಿದವರು. | ನಿಗದಿತ ಸ್ಥಾನಕ್ಕೆ ಅರ್ಹ ದಿವ್ಯಾಂಗ ಅಭ್ಯರ್ಥಿಗಳು ದೊರೆಯದಿದ್ದರೆ ಇತರೆ ಪರಿಶಿಷ್ಟ ಜಾತಿ ಮತ್ತು ಪ.ಪಂಗಡದ ಅಭ್ಯರ್ಥಿಗಳ ಆಯ್ಕೆಗೆ ಅವಕಾಶ ಕಲ್ಪಿಸಲಾಗುವುದು. |
| 2 | ಹಾಸ್ಟೆಲ್ ವಿದ್ಯಾರ್ಥಿಗಳು | 10% | ಸಮಾಜ ಕಲ್ಯಾಣ ಇಲಾಖೆ, ಪ.ಪಂಗಡಗಳ ನಿರ್ದೇಶನಾಲಯ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಲ್ಪ ಸಂಖ್ಯಾತರ ಇಲಾಖೆ, ಪ್ರಿ –ಮೆಟ್ರಿಕ್ / ಪೋಸ್ಟ್ ಮೆಟ್ರಿಕ್ / ಆಶ್ರಮ ಶಾಲೆಯಲ್ಲಿ ಕನಿಷ್ಠ 3 ವರ್ಷ ನಿಲಯಾರ್ಥಿಗಳಾಗಿದ್ದ ವಿದ್ಯಾರ್ಥಿಗಳು | ಸಂಬಂಧಪಟ್ಟ ವಿದ್ಯಾರ್ಥಿ ನಿಲಯದ ಮೇಲ್ವಿಚಾರಕರಿಂದ ನಮೂನೆ–A ರಲ್ಲಿ ವಿದ್ಯಾರ್ಥಿ ನಿಲಯದ ಅಭ್ಯರ್ಥಿ ಪ್ರಮಾಣ ಪತ್ರ ಪಡೆದಿರಬೇಕು. |

| ಕ್ರ.ಸಂ | ಮೀಸಲಾತಿ | ಶೇಕಡ ವಾರು | ಅರ್ಹರು | ಷರಾ |
|---|---|---|---|---|
| 3 | ವಸತಿ ಶಾಲೆಯ ವಿದ್ಯಾರ್ಥಿಗಳು | 10% | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಮತ್ತು ಅಲ್ಪ ಸಂಖ್ಯಾತರ ಇಲಾಖೆ ಅಡಿ ಬರುವ ಮೊರಾರ್ಜಿ ದೇಸಾಯಿ / ಕಿತ್ತೂರು ರಾಣಿ ಚೆನ್ನಮ್ಮ / ಅಂಬೇಡ್ಕರ್ ವಸತಿ ಶಾಲೆಯಲ್ಲಿ ಕನಿಷ್ಠ 05 ವರ್ಷಗಳ ಕಾಲ ವಿದ್ಯಾಭ್ಯಾಸ ಮಾಡಿದ ವಿದ್ಯಾರ್ಥಿಗಳು | ವಿದ್ಯಾರ್ಥಿಯು ಸಂಬಂಧಪಟ್ಟ ವಸತಿ ಶಾಲಾ ಪ್ರಾಂಶುಪಾಲರಿಂದ 05 ವರ್ಷ ಅಧ್ಯಾಯನ ಮಾಡಿದ ಪ್ರಮಾಣ ಪತ್ರವನ್ನು ನಮೂನೆ-B ರಲ್ಲಿ ಪಡೆದಿರಬೇಕು. |
| 4 | ಮಹಿಳಾ ವಿದ್ಯಾರ್ಥಿಗಳು | 33% | ಮಹಿಳಾ ಮೀಸಲಾತಿಯಂತೆ | ನಿಗದಿತ ಸಂಖ್ಯೆಯಲ್ಲಿ ಮಹಿಳಾ ಅಭ್ಯರ್ಥಿಗಳು ದೊರೆಯದಿದ್ದರೆ ಪುರುಷ ಪ.ಜಾತಿ ಮತ್ತು ಪ.ಪಗಂಡದ ಅಭ್ಯರ್ಥಿಗಳಿಗೆ ಅವಕಾಶವನ್ನು ಕಲ್ಪಿಸಲಾಗುತ್ತದೆ. |
| 5 | ಸೂಕ್ಷ್ಮ / ಅತೀ ಸೂಕ್ಷ್ಮ ಸಮುದಾಯ / ಸಫಾಯಿ ಕರ್ಮಚಾರಿ ಸಮುದಾಯದ ಮಕ್ಕಳು | 5% | | ನಿಗದಿತ ಸಂಖ್ಯೆಯಲ್ಲಿ ಸೂಕ್ಷ್ಮ / ಅತೀ ಸೂಕ್ಷ್ಮ ಸಮುದಾಯ/ ಸಫಾಯಿ ಕರ್ಮಚಾರಿ ಸಮುದಾಯದ ಅಭ್ಯರ್ಥಿಗಳು ದೊರೆಯದಿದ್ದರೆ ಇತರೆ ಪ.ಜಾತಿ ಮತ್ತು ಪ.ಪಗಂಡದ ಅಭ್ಯರ್ಥಿಗಳಿಗೆ ಅವಕಾಶವನ್ನು ಕಲ್ಪಿಸಲಾಗುತ್ತದೆ. |

**ಅರ್ಜಿ ಸಲ್ಲಿಸಲು ಹಾಗೂ ಶುಲ್ಕ ಪಾವತಿ ದಿನಾಂಕಗಳು:**

1. **ಆನ್‌ಲೈನ್ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ : 08–05–2025 ಮಧ್ಯಾಹ್ನ 12.00**
2. **ಆನ್‌ಲೈನ್ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 19–05–2025 ಸಂಜೆ 5.00 ರೊಳಗೆ**
3. **ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ : 20–05–2025 ಸಂಜೆ 5.00 ರೊಳಗೆ**

**ಪರೀಕ್ಷಾ ವೇಳಾಪಟ್ಟಿ ವಿವರಗಳು:**

| ಕ್ರಮ ಸಂಖ್ಯೆ | ವಿಷಯ | ಪರೀಕ್ಷಾ ದಿನಾಂಕ & ದಿನ | ಸಮಯ | ಒಟ್ಟು ಪ್ರಶ್ನೆಗಳು | ಒಟ್ಟು ಅಂಕಗಳು |
|---|---|---|---|---|---|
| 1 | ಸಾಮಾನ್ಯ ಅಧ್ಯಯನ | 31–05–2025 ಶನಿವಾರ | 02.30 PM to 04.30 PM | 100 | 100 |

- ಪ್ರವೇಶ ಪರೀಕ್ಷೆಯ ಪಠ್ಯಕ್ರಮವನ್ನು ಈ ಅಧಿಸೂಚನೆಯೊಂದಿಗೆ ಪ್ರಕಟಿಸಲಾಗಿದೆ.
- ತಪ್ಪು ಉತ್ತರಗಳಿಗೆ ಋಣಾತ್ಮಕ ಮೌಲ್ಯಮಾಪನವಿರುವುದಿಲ್ಲ.

**ಗಮನದಲ್ಲಿಡಬೇಕಾದ ಅಂಶಗಳು:**

1. KEA ವೆಬ್‌ಸೈಟ್ (https://cetonline.karnataka.gov.in/kea)ನಲ್ಲಿ ಕಾಲಕಾಲಕ್ಕೆ ನೀಡಲಾಗುವ ಮಾಹಿತಿಯು ಅಧಿಕೃತ ಹಾಗೂ ಅಂತಿಮವಾಗಿರುತ್ತದೆ.
2. UPSC/KPSC, IAS/KAS ಸ್ಪರ್ಧಾತ್ಮಕ ಪರೀಕ್ಷೆಗೆ ಇಲಾಖೆಯಿಂದ ಈಗಾಗಲೇ ತರಬೇತಿ ಪಡೆದ ಅಭ್ಯರ್ಥಿಗಳು ಪುನಃ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. KAS/SSC/RRB/ Banking/ Group-C, ಸ್ಪರ್ಧಾತ್ಮಕ ಪರೀಕ್ಷೆಗೆ ಇಲಾಖೆಯಿಂದ ತರಬೇತಿ ಪಡೆದ ಅಭ್ಯರ್ಥಿಗಳು ತರಬೇತಿಗೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.
3. ಪರೀಕ್ಷಾ ಕೇಂದ್ರಗಳು: ಕಲಬುರಗಿ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ.
4. ಇಲಾಖೆಯ ವತಿಯಿಂದ ಯಾವುದೇ IAS/KAS ಪತ್ರ ವ್ಯವಹಾರವನ್ನು ನಡೆಸಲಾಗುವುದಿಲ್ಲವಾದುದರಿಂದ KEA ವೆಬ್‌ಸೈಟ್ ಅನ್ನು ಕಾಲಕಾಲಕ್ಕೆ ವೀಕ್ಷಿಸತಕ್ಕದ್ದು ಹಾಗೂ KEA ವೆಬ್‌ಸೈಟ್ ನಲ್ಲಿ ಸೂಚನೆಯಾನುಸಾರವಾಗಿ ಪ್ರವೇಶ ಪರೀಕ್ಷಾ ಪತ್ರವನ್ನು ಡೌನಲೋಡ್ ಮಾಡಿಕೊಂಡು ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗುವುದು.
5. ತಪ್ಪು ಮಾಹಿತಿಯ ಕಾರಣದಿಂದ ಉಂಟಾಗಬಹುದಾದ ಲೋಪಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.
6. ಇಲಾಖಾ ವತಿಯಿಂದ ನಿಗದಿಪಡಿಸಿದ ದಿನಾಂಕದಂದು ಕೌನ್ಸಿಲಿಂಗ್, ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗದಿದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವುದಿಲ್ಲ. ಇಂತಹ ನಿರ್ಲಕ್ಷಕ್ಕೆ ಅಭ್ಯರ್ಥಿಗಳೇ ನೇರ ಹೊಣೆಗಾರರಾಗಿರುತ್ತಾರೆ.
7. ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪರೀಕ್ಷೆಯನ್ನು ನಡೆಸಿ ಅಂತಿಮ ಅಂಕಪಟ್ಟಿಯನ್ನು ಇಲಾಖೆಗೆ ಹಸ್ತಾಂತರಿಸಲಾಗುವುದು, ನಂತರ ಇಲಾಖಾವತಿಯಿಂದ ಪರೀಕ್ಷಾ ತರಬೇತಿಗೆ ನಿಯಮಾನುಸಾರ ಅಭ್ಯರ್ಥಿಗಳನ್ನು ಆಯ್ಕೆಮಾಡುವರು.

ಕಾರ್ಯನಿರ್ವಾಹಕ ನಿರ್ದೇಶಕರು

# ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

## ಐ.ಎ.ಎಸ್ ಹಾಗೂ ಕೆ.ಎ.ಎಸ್ ಪರೀಕ್ಷೆಗಳ ಪೂರ್ವಭಾವಿ ತರಬೇತಿಯ ಪ್ರವೇಶ ಪರೀಕ್ಷೆಯ ಪಠ್ಯಕ್ರಮ

1. ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ವಿಷಯಗಳ ಸಾಮಾನ್ಯ ಜ್ಞಾನ (ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಪ್ರಾಮುಖ್ಯತೆ)
2. ಭಾರತೀಯ ಪರಂಪರೆ ಮತ್ತು ಸಂಸ್ಕೃತಿ (ಕರ್ನಾಟಕ ರಾಜ್ಯದ ಮೇಲೆ ವಿಶೇಷ ಒತ್ತು).
3. ಭಾರತದ ಮತ್ತು ಕರ್ನಾಟಕ ಇತಿಹಾಸ. (ಭಾರತೀಯ ರಾಷ್ಟ್ರೀಯ ಚಳುವಳಿಗೆ ವಿಶೇಷ ಒತ್ತು).
4. ಭಾರತೀಯ ಮತ್ತು ವಿಶ್ವ ಭೂಗೋಳಶಾಸ್ತ್ರ. (ಕರ್ನಾಟಕ ರಾಜ್ಯದ ಮೇಲೆ ವಿಶೇಷ ಒತ್ತು).
5. ಭಾರತದ ಹಾಗೂ ಕರ್ನಾಟಕದ ಆರ್ಥಿಕ ಮತ್ತು ಸಾಮಾಜಿಕ ಬೆಳವಣಿಗೆಗಳು, ಸಾಮಾಜಿಕ ವಲಯದ ಉಪಕ್ರಮಗಳು ಇತ್ಯಾದಿ.
6. ಭಾರತದ ಸಂವಿಧಾನ, ಭಾರತದ ರಾಜಕೀಯ ವ್ಯವಸ್ಥೆ, ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಂಸ್ಥೆಗಳ ವಿಷಯಗಳು.
7. ಸಾಮಾನ್ಯ ವಿಜ್ಞಾನ ವಿಷಯಗಳು– ಕಂಪ್ಯೂಟರ್ ಸಾಕ್ಷರತೆ, ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು, ಜೀವ ವೈವಿಧ್ಯ, ತಾಪಮಾನ ಬದಲಾವಣೆ.
8. ಪ್ರಾಯೋಗಿಕ ಜ್ಞಾನ, ತಾರ್ಕಿಕ ಆಲೋಚನೆ ಮತ್ತು ಬೌದ್ಧಿಕ ಸಾಮರ್ಥ್ಯದ ವಿಷಯಗಳು. (ಎಸ್.ಎಸ್.ಎಲ್.ಸಿ ಮಟ್ಟದ್ದು)
9. ಪರಸ್ಪರ ಕೌಶಲ್ಯಗಳು (Interpersonal skills), ನಿರ್ಧಾರ ಕೈಗೊಳ್ಳುವಿಕೆ (Decision making) ಮತ್ತು ಸಮಸ್ಯೆ ಪರಿಹಾರ (Problem solving).

ಕಾರ್ಯನಿರ್ವಾಹಕ ನಿರ್ದೇಶಕರು